# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಪ್ರಭಯ್ಯ ಹಿರೇಮಠ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ಸುರಪುರ ಇವರ ಅಮಾನತ್ತಿನ ಅವಧಿಯನ್ನು ಹಕ್ಕಿನಲ್ಲಿರುವ ರಜೆಯೆಂದು ಪರಿಗಣಿಸುವ ಬಗ್ಗೆ.

ಓದಲಾಗಿದೆ: 1. ಸರ್ಕಾರದ ಕಾರಣಕೇಳುವ ನೋಟೀಸ್ ಸಂಖ್ಯೆ:ಗ್ರಾಅಪ 174 ವಿಸೇಬಿ 2014, ದಿ:29-09-2014.

2. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ:174:ವಿಸೇಬಿ:2014. ದಿ:15-10-2014.

3. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ:236:ವಿಸೇಬಿ:2014.ದಿ:23-07-2015.

4. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:174:ವಿಸೇಬಿ:2014.ದಿ:04.02.2016.

5. ಶ್ರೀ ಪ್ರಭಯ್ಯ ಹಿರೇಮಠ, ಇವರ ಮನವಿ ದಿ:08-11-2016.

-000-

ಪ್ರಸ್ತಾವನೆ:-

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಅನುಷ್ಠಾನಗೊಳಸುತ್ತಿರುವ ಎಲ್ಲಾ ಅಭಿವೃದ್ಧಿ ಕಾಮಗಾರಿಗಳ ಕ್ರಿಯಾ ಯೋಜನೆ ತಯಾರಿಸಿ, ಆಡಳತಾತ್ಮಕ ಮಂಜೂರಾತಿ, ತಾಂತ್ರಿಕ ಮಂಜೂರಾತಿ, ಟೆಂಡರ್ ಪ್ರಕ್ರಿಯೆಯ ವಿವರಗಳು ಹಾಗೂ ಕಾಮಗಾರಿಗಳಗೆ ಸಂಬಂಧಿಸಿದಂತೆ ಬಿಲ್ಲುಗಳ ಪಾವತಿ ವಿವರಗಳನ್ನು ಗಣಕೀಕರಣಗೊಳಸಲು ಸೂಚಿಸಲಾಗಿರುತ್ತದೆ. ಹಾಗೂ ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದ ಬಳಕೆಯನ್ನು ದಿ:02-04-2013 ರಿಂದ ಕಡ್ಡಾಯಗೊಳಸಿದೆ. ಮತ್ತು ದಿನಾಂಕ:03-10-2013 ರಿಂದ ತಂತ್ರಾಂಶದ ಹೊರಗಡೆ ಬಿಲ್ಲು ಪಾವತಿಸುವುದನ್ನು ನಿಷೇಧಿಸಲಾಗಿದೆ. ಆದಾಗ್ಯೂ ಈ ಯೋಜನೆಯನ್ನು ಕೆಲವೊಂದು ಜಿಲ್ಲೆಗಳಲ್ಲಿ ನಿರೀಕ್ಷಿತ ಮಟ್ಟದಲ್ಲಿ ಅನುಷ್ಠಾನಗೊಳಸದಿರುವುದು ಸರ್ಕಾರದ ಗಮನಕ್ಕೆ ಬಂದ ಹಿನ್ನಲೆಯಲ್ಲಿ ಸದರಿ ತಂತ್ರಾಂಶವನ್ನು ಅನುಷ್ಠಾನಗೊಳಸದೆ ಕರ್ತವ್ಯ ಲೋಪವೆಸಗಿದ ಅಧಿಕಾರಿಗಳಗೆ ದಿನಾಂಕ: 19-05-2014 ರ ಕಾರಣ ಕೇಳುವ ನೋಟೀಸು ಜಾರಿಗೊಳಸಿ ಈ ಬಗ್ಗೆ 3 ದಿನಗಳ ಒಳಗಾಗಿ ಸಮಜಾಯಿಷಿ ನೀಡಲು ಸೂಚಿಸಿದ್ದು, ಆದರೆ ಸದರಿ ಅಧಿಕಾರಿಗಳು 4 ತಿಂಗಳ ಅವಧಿ ಗತಿಸಿದರೂ ಸಹ ಉತ್ತರವನ್ನು ಸಲ್ಲಸದೆ ಕರ್ತವ್ಯ ನಿರ್ಲಕ್ಷತೆ ಎಸಗಿದ ಶ್ರೀ ಪ್ರಭಯ್ಯ ಹಿರೇಮಠ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ಸುರಪುರ ಇವರು ಸೇರಿದಂತೆ ಇತರೇ ಅಧಿಕಾರಿಗಳ ವಿರುದ್ಧ ಕರ್ನಾಟಕ ನಾಗರಿಕ ಸೇವಾ (ವ.ನಿ.ಮೇ) ನಿಯಮಗಳು 1957ರ ನಿಯಮ 12(1)(ಎ)ರಡಿಯಲ್ಲ ಮೇಲೆ ಕ್ರಮ ಸಂಖ್ಯೆ (1) ರಲ್ಲ ಓದಲಾದ ದಿನಾಂಕ:29-09-2014 ರಂದು ಕಾರಣ ಕೇಳುವ ನೋಟಿಸೊಂದಿಗೆ ದೋಷಾರೋಪಣೆ ಪಟ್ಟಿಯನ್ನು ಜಾರಿ ಮಾಡಲಾಗಿತ್ತು.

ಮೇಲೆ ಕ್ರಮ ಸಂಖ್ಯೆ (2) ರಲ್ಲ ಓದಲಾದ ದಿನಾಂಕ:15-10-2014ರ ಆದೇಶದಲ್ಲ ಶ್ರೀ ಪ್ರಭಯ್ಯ ಹಿರೇಮಠ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ಸುರಪುರ ಇವರು ಸೇರಿದಂತೆ ಇತರೆ ಅಧಿಕಾರಿಗಳನ್ನು ದಿನಾಂಕ: 15.10.2014ರ ಆದೇಶದಲ್ಲ ಸೇವೆಯಿಂದ ಅಮಾನತ್ತುಪಡಿಸಲಾಗಿತ್ತು.

ಮೇಲೆ ಕ್ರಮ ಸಂಖ್ಯೆ (3) ರಲ್ಲ ಓದಲಾದ ದಿನಾಂಕ:23-07-2015ರ ಆದೇಶದಲ್ಲಿ ಶ್ರೀ ಪ್ರಭಯ್ಯ ಹಿರೇಮಠ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ಸುರಪುರ ಇವರ ಅಮಾನತ್ತು ತೆರವುಗೊಳಸಿ ಸೇವೆಗೆ ಪುನರ್ ಸ್ಥಾಪಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ (4) ರಲ್ಲ ಓದಲಾದ ದಿನಾಂಕ:04-02-2016ರ ಆದೇಶದಲ್ಲ ಶ್ರೀ ಪ್ರಭಯ್ಯ ಹಿರೇಮಠ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ಸುರಪುರ ಇವರಿಗೆ ಕ್ರಮಾಂಕ ಗ್ರಾಅಪ 174 ವಿಸೇಬಿ 2014 ದಿನಾಂಕ:29-09-2014ರ ನೋಟೀಸಿನ ಜೊತೆ ಜಾರಿ ಮಾಡಿರುವ ಆರೋಪಗಳಗೆ ಸಂಬಂಧಿಸಿದಂತೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳ 1957 ರ ನಿಯಮ 8(ii)ರಡಿ "ವಾಗ್ದಂಡನೆ" ವಿಧಿಸಿ ಆದೇಶಿಸಿದೆ.

..2

ಮೇಲೆ ಕ್ರಮ ಸಂಖ್ಯೆ (5) ರಲ್ಲಿ ಓದಲಾದ, ಶ್ರೀ ಪ್ರಭಯ್ಯ ಹಿರೇಮಠ, ಇವರು ದಿ:08-11-2016ರ ಪತ್ರದಲ್ಲಿ ಸರ್ಕಾರಕ್ಕೆ ಮನವಿ ಸಲ್ಲಿಸಿ, ಅಮಾನತ್ತಿನ ಅವಧಿಯನ್ನು ತಮ್ಮ ಹಕ್ಕಿನಲ್ಲಿರುವ ಪರಿವರ್ತಿತ ರಜೆ ಮಂಜೂರು ಮಾಡುವಂತೆ ಕೋರಿರುತ್ತಾರೆ. ಸರ್ಕಾರವು ಸದರಿಯವರ ಮನವಿಯನ್ನು ಕೂಲಂಕಷವಾಗಿ ಪರಿಶೀಲಿಸಿದೆ.

ಶ್ರೀ ಪ್ರಭಯ್ಯ ಹಿರೇಮಠ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ಸುರಪುರ ಪ್ರಸ್ತುತ ಸಹಾಯಕ ಯೋಜನಾಧಿಕಾರಿ, ಡಿ.ಆರ್.ಡಿ.ಎ.ಜಿಲ್ಲಾ ಪಂಚಾಯಿತಿ, ಕಲಬುರಗಿ ಇವರ ದಿನಾಂಕ:25-10-2014ರ ರಿಂದ ದಿನಾಂಕ:31-12-2015ರ ವರೆಗಿನ ಅಮಾನತ್ತು ಅವಧಿಯನ್ನು ಅವರ ಹಕ್ಕಿನಲ್ಲಿರುವ 266 ಪರಿವರ್ತಿತ ರಜೆಗಳು ಮತ್ತು 300 ದಿನಗಳ ಗಳಿಕೆ ರಜೆಯನ್ನು ಒಟ್ಟು ಸೇರಿ 433 ದಿನಗಳ ಸಂಯುಕ್ತ ರಜೆಯನ್ನು ಕರ್ನಾಟಕ ನಾಗರೀಕ ಸೇವಾ ನಿಯಮಾವಳಗಳು 1958ರ ನಿಯಮ 100(7) ರನ್ವಯ ಹಾಗೂ ದಿನಾಂಕ:15-10-2014ರ ರಿಂದ ದಿನಾಂಕ31-12-2015ರ ವರೆಗಿನ ಅಮಾನತ್ತು ಅವಧಿಯನ್ನು ಕರ್ನಾಟಕ ನಾಗರೀಕ ಸೇವಾ ನಿಯಮಾವಳಗಳು 1958ರ ನಿಯಮ 100ರಡಿಯಲ್ಲಿ ಸಕ್ರಮಗೊಳಿಸಿ ಅವರ ಹಕ್ಕಿನಲ್ಲಿರುವ ರಜೆ/ಅಸಾಧಾರಣ ರಜೆಯೆಂದು ಪರಿಗಣಿಸುವುದು ಸೂಕ್ತವೆಂದು ಸರ್ಕಾರವು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 244 ವಿಸೇಬಿ 2016, ಬೆಂಗಳೂರು, ದಿನಾಂಕ:07-06-2017

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಶ್ರೀ ಪ್ರಭಯ್ಯ ಹಿರೇಮಠ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ಸುರಪುರ ಪ್ರಸ್ತುತ ಸಹಾಯಕ ಯೋಜನಾಧಿಕಾರಿ, ಡಿ.ಆರ್.ಡಿ.ಎ.ಜಿಲ್ಲಾ ಪಂಚಾಯಿತಿ, ಕಲಬುರಗಿ ಇವರ ದಿನಾಂಕ:25-10-2014 ರಿಂದ ದಿನಾಂಕ:31-12-2015ರ ವರೆಗಿನ ಅಮಾನತ್ತಿನ ಅವಧಿಯನ್ನು ಅವರ ಹಕ್ಕಿನಲ್ಲಿರುವ 266 ಪರಿವರ್ತಿತ ರಜೆಗಳು ಮತ್ತು 300 ದಿನಗಳ ಗಳಿಕೆ ರಜೆಯನ್ನು ಒಟ್ಟು ಸೇರಿ 433 ದಿನಗಳ ಸಂಯುಕ್ತ ರಜೆಯನ್ನು ಕರ್ನಾಟಕ ನಾಗರೀಕ ಸೇವಾ ನಿಯಮಾವಳಗಳು 1958ರ ನಿಯಮ 100(7)ರ ಪ್ರಕಾರ ಅವರ ಹಕ್ಕಿನಲ್ಲಿರುವ ರಜೆ/ ಅಸಾಧಾರರಣ ರಜೆಯೆಂದು ಪರಿಗಣಿಸಿ ಅದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

07/06/2017

(ಎಸ್ ರಂಗನಗೌಡ),
ಸರ್ಕಾರದ ಅಧೀನ ಕಾರ್ಯದರ್ಶಿ,(ಸೇ.ಬಿ & ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಯಾದಗಿರಿ ಜಿಲ್ಲೆ
3. ಶ್ರೀ ಪ್ರಭಯ್ಯ ಹಿರೇಮಠ,(ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ,ತಾಲ್ಲೂಕು ಪಂಚಾಯತಿ, ಸುರಪುರ) ಪ್ರಸ್ತುತ ಸಹಾಯಕ ಯೋಜನಾಧಿಕಾರಿ, ಡಿ.ಆರ್.ಡಿ.ಎ.ಜಿಲ್ಲಾ ಪಂಚಾಯಿತಿ, ಕಲಬುರಗಿ.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) /ಜಂಟಿ ಕಾರ್ಯದರ್ಶಿ(ಆಡಳಿತ),ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.
5. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
6. ಮಾಹಿತಿ ಕೇಂದ್ರ / ಶಾಖಾ ರಕ್ಷಕ ಕಡತ / ಹೆಚ್ಚುವರಿ ಪ್ರತಿ.